| Govt. Order No. MWD 50 WGA 2017<br>Dated: 13-12-2017 of Kalaburagi Division | | | |
|---|---|---|---|
| Sl No. | Name of the District | No. of Waqf Instituion | Grant Amount |
| 1 | Ballari | 35 | 65,00,000 |
| 2 | Bidar | 30 | 59,50,000 |
| 3 | Kalburagi | 17 | 32,50,000 |
| 4 | Koppal | 15 | 29,00,000 |
| 5 | Raichur | 75 | 146,50,000 |
| 6 | Yadgir | 85 | 168,00,000 |
| | Total | **257** | **500,50,000** |

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : 2017-18ನೇ ಸಾಲಿನಲ್ಲಿ ಜಿಲ್ಲೆಗಳಲ್ಲಿರುವ ವಕ್ಫ್ ಸಂಸ್ಥೆಗಳ ದುರಸ್ಥಿ ಮತ್ತು ಜೀರ್ಣೋದ್ಧಾರಕ್ಕಾಗಿ ಅನುದಾನ ಬಿಡುಗಡೆ ಮಾಡುವ ಬಗ್ಗೆ.

****

ಓದಲಾಗಿದೆ : 1) ಸರ್ಕಾರಿ ಆದೇಶ ಸಂಖ್ಯೆ: MWD 139 CWF 77 ದಿನಾಂಕ:23-08-1979

2) ಸರ್ಕಾರಿ ಆದೇಶ ಸಂಖ್ಯೆ: MWD 61 WES 2017, ದಿನಾಂಕ:16-05-2017. 22-09-2017 ಮತ್ತು 08-11-2017

3) ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ: MWD 356 MDS 2017, ದಿನಾಂಕ:12-12-2017.

4) ಮುಖ್ಯಕಾರ್ಯನಿರ್ವಹಣಾಧಿಕಾರಿ. ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ಇವರ ಪತ್ರ ಸಂಖ್ಯೆ: KBW/Accts/Misc/01/2017-18,ದಿನಾಂಕ:-28-10-2017.

**ಪ್ರಸ್ತಾವನೆ:**

ಮೇಲೆ (1)ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ರಾಜ್ಯದಲ್ಲಿನ ವಕ್ಫ್ ಸಂಸ್ಥೆಗಳಿಗೆ Grant-in Aid Code ಅನ್ನು ಆಗಸ್ಟ್ 1979 ರಲ್ಲಿ ಜಾರಿಗೊಳಿಸಲಾಗಿದೆ.

ಮೇಲೆ (2)ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ವಕ್ಫ್ ಸಂಸ್ಥೆಗಳ ಜೀರ್ಣೋದ್ಧಾರ ಹಾಗೂ ದುರಸ್ಥಿಗಾಗಿ 2017-18ನೇ ಸಾಲಿಗೆ ಲೆಕ್ಕ ಶೀರ್ಷಿಕೆ 2250-00-102-5-02(103) (ಯೋಜನೆ) ರಡಿಯಲ್ಲಿ ಸರ್ಕಾರವು ರೂ.1000.00ಲಕ್ಷಗಳ ಅನುದಾನವನ್ನು ನಿಗಧಿಪಡಿಸಿ ಮೊದಲನೇ, ಎರಡನೇ ಹಾಗೂ ಮೂರನೇ ತ್ರೈಮಾಸಿಕ ಕಂತಿನ ಅನುದಾನ ಒಟ್ಟು ರೂ.750.00ಲಕ್ಷ ಮಂಜೂರು ಮಾಡಲಾಗಿದೆ.

ಮೇಲೆ (3)ರಲ್ಲಿ ಓದಲಾದ ಸರ್ಕಾರಿ ತಿದ್ದುಪಡಿ ಆದೇಶದಲ್ಲಿ 2017-18ನೇ ಸಾಲಿನ ಆಯವ್ಯಯದಲ್ಲಿ ರೂ.100.00ಕೋಟಿ ಸನ್ಮಾನ್ಯ ಮುಖ್ಯಮಂತ್ರಿಗಳ ಅಭಿವೃದ್ಧಿ ಯೋಜನೆಯಡಿಯಲ್ಲಿ ಕಾರ್ಯಕ್ರಮಗಳ ಅನುಷ್ಠಾನಕ್ಕೆ ಒದಗಿಸಿದ್ದು, ಅದರಲ್ಲಿ ವಕ್ಫ್ ಸಂಸ್ಥೆಗಳ ಜೀರ್ಣೋದ್ಧಾರ ಮತ್ತು ದುರಸ್ಥಿಗೆ 1500.00ಲಕ್ಷ ಅನುದಾನ ಮಂಜೂರು ಮಾಡಲಾಗಿರುತ್ತದೆ.

ಮೇಲೆ (4) ರಲ್ಲಿ ಓದಲಾದ ಪತ್ರದಲ್ಲಿ ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯಿಂದ ಪ್ರಸ್ತಾವನೆಗಳನ್ನು ಪಡೆಯಲಾಗಿದ್ದು ಇವುಗಳನ್ನು ಪರಿಶೀಲಿಸಿ ರಾಜ್ಯದ ಒಟ್ಟು 30 ಜಿಲ್ಲೆಗಳಲ್ಲಿನ 1114 ವಕ್ಫ್ ಸಂಸ್ಥೆಗಳಿಗೆ ಅನುದಾನವನ್ನು ಬಿಡುಗಡೆ ಮಾಡಲು ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: MWD 50 WGA 2017, ಬೆಂಗಳೂರು, ದಿನಾಂಕ:13-12-2017

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಅನುಬಂಧದಲ್ಲಿನ ರಾಜ್ಯದ 30 ಜಿಲ್ಲೆಗಳಲ್ಲಿರುವ 1114 ವಕ್ಫ್ ಸಂಸ್ಥೆಗಳ ಜೀರ್ಣೋದ್ಧಾರ ಹಾಗೂ ದುರಸ್ಥಿಗಾಗಿ ಒಟ್ಟು **ರೂ.22,17,50,000/-(ಇಪ್ಪತ್ತೆರಡು ಕೋಟಿ ಹದಿನೇಳು ಲಕ್ಷದ ಐವತ್ತುಸಾವಿರ ರೂಪಾಯಿಗಳು ಮಾತ್ರ)** ಗಳ ಅನುದಾನವನ್ನು ಮಂಜೂರು ಮಾಡಿದ್ದು ಆ ಸಂಸ್ಥೆಗಳ ಎದುರಿಗೆ ಸೂಚಿಸಲಾಗಿರುವ ಪ್ರತ್ಯೇಕ ಮೊತ್ತವನ್ನು ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಬಿಡುಗಡೆ ಮಾಡಲು ಆದೇಶಿಸಿದೆ.

.........2